**Online Newspaper Clipping Service**
**Dtd-Tuesday, 25th , July 2023** **Page No.05**

ವಿಜಯ ಕರ್ನಾಟಕ

# ತಾಯಿ ಹೆಸರಿನಲ್ಲಿ ಆಂಬ್ಯುಲೆನ್ಸ್ ಕೊಡುಗೆ



ಮುಳಬಾಗಲು ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಶಾಸಕ ಸಮೃದ್ಧಿ ಮಂಜುನಾಥ್ ಉದ್ಘಾಟಿಸಿದರು.

**ವಿಕ ಸುದ್ದಿಲೋಕ** ಮುಳಬಾಗಲು

ತಾಯಿ ದಿವಂಗತ ಮುನಿಯಮ್ಮ ಅವರ ಹೆಸರಿನಲ್ಲಿ ತಾಲೂಕಿನ ಮೂರು ಸರಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಉಚಿತವಾಗಿ ಆಂಬ್ಯುಲೆನ್ಸ್ ಗಳನ್ನು ನೀಡಲಾಗುವುದು ಎಂದು ಶಾಸಕ ಸಮೃದ್ಧಿ ಮಂಜುನಾಥ್ ತಿಳಿಸಿದರು.

ಅವರು ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ರೆಡ್‌ಕ್ರಾಸ್ ಘಟಕ ಹಾಗೂ ಆರ್.ಎಲ್. ಜಾಲಪ್ಪ ಆಸ್ಪತ್ರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರ ಉದ್ಘಾಟಿಸಿ ಮಾತನಾಡಿದರು. ಇಲ್ಲಿನ ವಿದ್ಯಾರ್ಥಿಗಳಿಗೆ ಅನುಕೂಲ ವಾಗುವ ನಿಟ್ಟಿನಲ್ಲಿ ಕ್ಯಾಂಟೀನ್ ಅನ್ನು 2 ತಿಂಗಳ ಒಳಗೆ ಪ್ರಾರಂಭಿಸಲು ಕ್ರಮ ತೆಗೆದು ಕೊಳ್ಳಲಾಗುವುದೆಂದು ತಿಳಿಸಿದರು. ತಾಲೂಕು ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಆರೋಗ್ಯ ಕಾಪಾಡುವ ದೃಷ್ಟಿಯಿಂದ ಹಮ್ಮಿಕೊಳ್ಳುವ ಆರೋಗ್ಯ ತಪಾಸಣೆ ಶಿಬಿರಗಳಿಗೆ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು. ಆರೋಗ್ಯವೇ ಮಹಾಭಾಗ್ಯ ಎಂಬುದನ್ನು

ಪ್ರತಿಯೊಬ್ಬರು ಅರ್ಥಮಾಡಿಕೊಂಡು ತಮ್ಮ ಆರೋಗ್ಯ ಕಾಪಾಡಿಕೊಳ್ಳುವುದು ಅತ್ಯಗತ್ಯ ಉತ್ತಮ ಆಹಾರ ಶೈಲಿ, ವ್ಯಾಯಾಮ, ಯೋಗ ಮಾಡುವುದನ್ನು ರೂಢಿಸಿಕೊಂಡರೇ ಉತ್ತಮ ಆರೋಗ್ಯ ಕಾಪಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಭವಿಷ್ಯದಲ್ಲಿ ವಿದ್ಯಾರ್ಥಿಗಳು ಉತ್ತಮ ಜೀವನ ನಡೆಸಬೇಕಾದರೆ, ಆರೋಗ್ಯ ವಂತರಾಗುವುದು ಅತ್ಯಗತ್ಯ ಎಂದು ತಿಳಿಸಿದರು.

ಉತ್ತಮ ಆರೋಗ್ಯ ಹೊಂದಿದವರೇ ಅತ್ಯಂತ ಶ್ರೀಮಂತರು ಇದನ್ನು ಅರ್ಥಮಾಡಿಕೊಂಡು ಒಳ್ಳೆಯ ಹವ್ಯಾಸಗಳನ್ನು ರೂಢಿಸಿಕೊಂಡು ಪೌಷ್ಟಿಕ ಆಹಾರ ಹಾಗೂ ಶುದ್ಧ ನೀರು ಸೇವನೆ ಮಾಡಬೇಕು ಎಂದು ತಿಳಿಸಿದರು.

ಕೆ.ಸಿ.ವ್ಯಾಲಿ ಯೋಜನೆಯಡಿ ಜಿಲ್ಲೆಯ ಕೆರೆಗಳಿಗೆ ಬೆಂಗಳೂರಿನ ಮನೆಗಳ ಬಚ್ಚಲು ನೀರನ್ನು ಸರಬರಾಜು ಮಾಡುತ್ತಿದ್ದು ಇದು ವಿಷಕಾರಿಯಾಗಿದೆ ಇದರಿಂದ ಇಲ್ಲಿನ ಜನರಿಗೆ ಆರೋಗ್ಯದಲ್ಲಿ ಹೆಚ್ಚು ತೊಂದರೆ ಯಾಗುವ ಸಂಭವ ಇರುವುದರಿಂದ

3ನೇ ಹಂತದ ಶುದ್ಧೀಕರಣಕ್ಕೆ ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ಈಗಾಗಲೇ ಅಧಿವೇಶನದಲ್ಲಿ ಪ್ರಸ್ತಾಪ ಮಾಡಿದ್ದು ಸರಕಾರ ಇದನ್ನು ಗಂಭೀರವಾಗಿ ಪರಿಗಣಿಸದೇ ಇದ್ದರೆ ಎಂತಹ ಹೋರಾಟಕ್ಕೂ ಸಿದ್ದ ಎಂದು ತಿಳಿಸಿದರು. ಸದರಿ ಕಾಲೇಜಿಗೆ ಬಡ ವಿದ್ಯಾರ್ಥಿಗಳೇ ಬರುತ್ತಿದ್ದು, ಅವರಿಗೆ ಆರೋಗ್ಯ ಶಿಬಿರವನ್ನು ಪ್ರಾಂಶುಪಾಲರು ಆಯೋಜನೆ ಮಾಡಿರುವುದು ಸಂತೋಷದ ಸಂಗತಿ ಎಂದು ತಿಳಿಸಿದರು. 40ಕ್ಕೂ ಹೆಚ್ಚು ವೈದ್ಯರು ಶಿಬಿರದಲ್ಲಿ ಹಾಜರಿದ್ದು 1200 ವಿದ್ಯಾರ್ಥಿಗಳು, 200 ಪೋಷಕರು, 100 ಮಂದಿ ಸಿಬ್ಬಂದಿಗೆ ಆರೋಗ್ಯ ತಪಾಸಣೆ ಮಾಡಿ ಔಷಧ ವಿತರಿಸಲಾಯಿತು.

ಆರ್.ಎಲ್. ಜಾಲಪ್ಪ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರು ಕೆ. ಪ್ರಭಾಕರ್, ಸರಕಾರಿ ಕಾಲೇಜಿನ ಪ್ರಾಂಶುಪಾಲ ಡಾ. ಜಿ.ಮುನಿವೆಂಕಟಪ್ಪ, ತಹಸೀಲ್ದಾರ್ ಬಿ.ಆರ್. ಮುನಿವೆಂಕಟಪ್ಪ, ಜಿ.ಪಂ. ಎಇಇ ಗೋಪಾಲ್, ಡಾ.ಟಿ. ಚೈತ್ರ, ಡಾ. ಸುನೀಲ್, ಡಾ.ಪ್ರತಾಪ್, ಉಪನ್ಯಾಸಕರಾದ ಎಂ.ಎನ್. ಮೂರ್ತಿ, ಟಿ.ಎಸ್. ಶ್ರೀನಿವಾಸ್, ಆದಿನಾರಾಯಣ, ಎ.ಎಸ್. ವಸುಂದರ, ಜೀಯಾವುಲ್ಲ, ಡಾ.ಸಿ. ಉಮೇಶ್, ಶಿವರಾಮೇಗೌಡ, ಹಾಜರಿದ್ದರು.